ಆನೇಕಲ್‌ನಲ್ಲಿ ಶುಕ್ರವಾರ ಅಲಯನ್ಸ್ ವಿಶ್ವವಿದ್ಯಾಲಯ ಮತ್ತು ಬೆಂಗಳೂರು ಗ್ರಾಮಾಂತರ ಪೊಲೀಸ್ ಇಲಾಖೆಯ ವತಿಯಿಂದ
ಅಂತರರಾಷ್ಟ್ರೀಯ ಮಾದಕ ವ್ಯಸನ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನದ ಪ್ರಯುಕ್ತ ಜಾಗೃತಿ ಜಾಥಾ ಆಯೋಜಿಸಲಾಗಿತ್ತು

ಮಾದಕವಸ್ತು ವ್ಯಸನ ಸಾಮಾಜಿಕ ಪಿಡುಗು

ಪ್ರಜಾವಾಣಿ ವಾರ್ತೆ

ಆನೇಕಲ್ : ಅಲಯನ್ಸ್ ವಿಶ್ವವಿದ್ಯಾಲಯ ಮತ್ತು ಬೆಂಗಳೂರು ಗ್ರಾಮಾಂತರ ಪೊಲೀಸ್ ಇಲಾಖೆಯ ವತಿಯಿಂದ ಅಂತರರಾಷ್ಟ್ರೀಯ ಮಾದಕ ವ್ಯಸನ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನದ ಪ್ರಯುಕ್ತ ಪಟ್ಟಣದ ಬಸ್ ನಿಲ್ದಾಣದಲ್ಲಿ ಶುಕ್ರವಾರ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಆನೇಕಲ್ ಸರ್ಕಲ್ ಇನ್‌ಸ್ಪೆಕ್ಟರ್ ತಿಪ್ಪೇಸ್ವಾಮಿ ಮಾತನಾಡಿ, ಮಾದಕ ವಸ್ತುಗಳ ಸೇವನೆ ಸಾಮಾಜಿಕ ಪಿಡುಗಾಗಿದ್ದು ಇದರ ನಿರ್ಮೂಲನೆಗೆ ಜಾಗೃತಿಯೇ ಔಷಧವಾಗಿದೆ. ಮಾದಕ ವಸ್ತುಗಳ ಸೇವನೆಯಿಂದ ಅರಿವಿಲ್ಲದೇ ಖಿನ್ನತೆಗೆ ಒಳಗಾಗುತ್ತಾರೆ. ಇತ್ತೀಚಿನ ದಿನಗಳಲ್ಲಿ ಮಾದಕ ವಸ್ತುಗಳ ಸೇವನೆಯಿಂದ ಅಪರಾಧ ಚಟುವಟಿಕೆಗಳು ಹೆಚ್ಚಾಗಿವೆ. ಹಾಗಾಗಿ ಯುವ ಸಮುದಾಯ ಮಾದಕ ವಸ್ತುಗಳ ಸೇವನೆಯಿಂದ ದೂರವಿರಬೇಕು ಎಂದರು.

ಅಲಯನ್ಸ್ ವಿಶ್ವವಿದ್ಯಾಲಯದ ರಿಜಿಸ್ಟರ್ ಮಠಂ ವಿಶ್ವನಾಥಯ್ಯ ಮಾತನಾಡಿ, ಅರಿವಿನ ಕೊರತೆಯಿಂದ ವಿದ್ಯಾರ್ಥಿಗಳು ಅಪರಾಧ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುತ್ತಾರೆ. ಇದೊಂದು ಸುಳಿಯಿದ್ದಂತೆ, ಈ ಸುಳಿಯಿಂದ ಹೊರ ಬರುವುದು ಅತ್ಯಂತ ಕ್ಲಿಷ್ಟಕರವಾಗುತ್ತದೆ. ಇದಕ್ಕೆ ಜಾಗೃತಿಯೇ ಮದ್ದು. ಈ ನಿಟ್ಟಿನಲ್ಲಿ ಪೋಷಕರು ಹಾಗೂ ಶಿಕ್ಷಕರು ಮಕ್ಕಳ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.